# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1004 |
| ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ<br>(ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 20-08-2025 |

| | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಮತ್ತು ಅಧೀನ ಕಚೇರಿಗಳಲ್ಲಿ ಉಪಯೋಗಿಸುವ ವಾಹನ (ಗುತ್ತಿಗೆ. ಹೊರಗುತ್ತಿಗೆ ಪಡೆದ ಖಾಸಗಿ ವಾಹನ)ಗಳಲ್ಲಿ 'ಕರ್ನಾಟಕ ಸರ್ಕಾರ'ದ ಹೆಸರು, 'ಲಾಂಛನ' ಹಾಗೂ ಸಂಸ್ಥೆಯ ಹೆಸರು/ ಚಿಹ್ನೆ / ಬರಹ ಇತ್ಯಾದಿ ಹೆಸರುಗಳನ್ನು ಬಳಸಲು ಅವಕಾಶ ವಿದೆಯೇ: | ಸರ್ಕಾರದ ಎಲ್ಲಾ ಇಲಾಖೆಗಳು/ ನಿಗಮಗಳು/ ಮಂಡಳಿಗಳು/ ಸರ್ಕಾರೇತರ ಸಂಘ ಸಂಸ್ಥೆಗಳಲ್ಲಿ ಉಪಯೋಗಿಸುವ ಯಾವುದೇ ಖಾಸಗಿ ವಾಹನಗಳಲ್ಲಿ ಸ್ವಕೀಯ ಸಂಸ್ಥೆಗಳ ಹೆಸರು, ಚಿಹ್ನೆ/ ಲಾಂಛನಗಳನ್ನು ವಾಹನಗಳ ನೋಂದಣಿ ಫಲಕಗಳ ಮೇಲೆ ಅನಧಿಕೃತವಾಗಿ ಅಳವಡಿಸಿಕೊಳ್ಳುವುದು ಕೇಂದ್ರ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 50 ಮತ್ತು 51ರಲ್ಲಿ ನಿಗದಿಪಡಿಸಿರುವ ಮಾನದಂಡಗಳಿಗೆ ಹಾಗೂ ಕೇಂದ್ರದ The Emblems of India (Prohibition of Improper Use) Act 2005 (50 of 2005) ಕಲಂ 3, 4 ಮತ್ತು 5ರ ಉಲ್ಲಂಘನೆಯಾಗುತ್ತದೆ.<br><br>ಆದ್ದರಿಂದ, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಮತ್ತು ಅಧೀನ ಕಚೇರಿಗಳಲ್ಲಿ ಉಪಯೋಗಿಸುವ ವಾಹನಗಳಲ್ಲಿ ಕರ್ನಾಟಕ ಸರ್ಕಾರದ ಹೆಸರು, 'ಲಾಂಛನ' ಹಾಗೂ ಸಂಸ್ಥೆಯ ಹೆಸರು/ ಚಿಹ್ನೆ/ಬರಹಗಳನ್ನು ಬಳಸಲು ಅವಕಾಶವಿರುವುದಿಲ್ಲ. |
| ಆ. | ಅವಕಾಶವಿಲ್ಲದಿದ್ದಲ್ಲಿ, ಈ ರೀತಿ ಅನಧಿಕೃತವಾಗಿ ಬರಹ ಮತ್ತು ಫಲಕ ಗಳನ್ನು ವಾಹನಗಳಲ್ಲಿ ಅವಳಡಿಸಿ ಉಪಯೋಗಿಸುವವರ ವಿರುದ್ಧ ಯಾವ ರೀತಿಯ ದಂಡನೆಗಳನ್ನು ವಿಧಿಸ ಲಾಗುತ್ತದೆ: ತೆರವುಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು: | ಸಾರಿಗೆ ಇಲಾಖೆಯ ಎಲ್ಲಾ ವಿಭಾಗದ ಜಂಟಿ ಸಾರಿಗೆ ಆಯುಕ್ತರುಗಳಿಗೆ ಅವರ ವಿಭಾಗದ ಕಛೇರಿಗಳ ವ್ಯಾಪ್ತಿಯಲ್ಲಿ ಮೇಲಿನ ಪ್ರಕರಣಗಳ ಕುರಿತು ವಿಶೇಷ ತನಿಖಾ ತಂಡಗಳನ್ನು ರಚಿಸಿ, ಪ್ರವರ್ತನ ಕಾರ್ಯ ಕೈಗೊಳ್ಳಲು ಸೂಚಿಸಲಾಗಿದೆ. ತಪ್ಪಿತಸ್ಥ ಪ್ರಕರಣಗಳಲ್ಲಿ ಮೋಟಾರು ವಾಹನ ಕಾಯ್ದೆ 1988ರ ಕಲಂ 200 ರಡಿ ಮೊದಲ ಅಪರಾಧಕ್ಕೆ ರೂ.500/- ಹಾಗೂ 2ನೇ ಮತ್ತು ಆನಂತರದ ಅಪರಾಧಕ್ಕೆ ರೂ.1000/- ದಂಡ ವಿಧಿಸಲಾಗುತ್ತಿದೆ. |
| ಇ. | ಸರ್ಕಾರದ ವಿವಿಧ ಇಲಾಖೆಗಳ ಹಾಗೂ ಅಧೀನ ಕಚೇರಿಗಳಲ್ಲಿ ಮಾಸಿಕ ಬಾಡಿಗೆ ಆಧಾರದ ಮೇಲೆ ಗುತ್ತಿಗೆ/ಹೊರಗುತ್ತಿಗೆ ಯಲ್ಲಿ ಪಡೆದ ವಾಹನಗಳ ಮೇಲೆ 'ಕರ್ನಾಟಕ ಸರ್ಕಾರದ ಸೇವೆಯಲ್ಲಿ' ಎಂಬ ಹೆಸರು ಮತ್ತು ಸರ್ಕಾರದ ಲಾಂಛನವನ್ನು ಬಳಸಬಹುದೇ: | ಈ ರೀತಿಯ ಹೆಸರು ಮತ್ತು ಸರ್ಕಾರದ ಲಾಂಛನವನ್ನು ಬಳಸಲು ಅವಕಾಶವಿರುವುದಿಲ್ಲ. |
| ಈ. | ಸರ್ಕಾರ ಸ್ವಾಮ್ಯದ ಸಂಸ್ಥೆಗಳಲ್ಲದೆ ವಾಹನಗಳ ನೋಂದಣಿ ಫಲಕಗಳ ಮೇಲೆ ಅಧಿಕೃತವಾಗಿ ರಾಷ್ಟ್ರೀಯ ಹಕ್ಕುಗಳ ಆಯೋಗ, ರಾಜ್ಯ ಮಾನವ ಹಕ್ಕುಗಳ ಆಯೋಗಗಳ ಹೆಸರುಗಳನ್ನು ಹೋಲುವಂತಹ ರಾಷ್ಟ್ರೀಯ/ ರಾಜ್ಯ ಮಾನವ | ಸರ್ಕಾರದಿಂದ ಹೊರಡಿಸಲಾದ ಸುತ್ತೋಲೆ ಸಂಖ್ಯೆ.ಟಿಡಿ 126 ಟಿಡಿಓ 2022, ದಿ:19-05-2022 ರಲ್ಲಿ ಸರ್ಕಾರದ ಎಲ್ಲಾ ಇಲಾಖೆಗಳು/ ನಿಗಮಗಳು / ಮಂಡಳಿಗಳು / ಸರ್ಕಾರೇತರ ಸಂಘ ಸಂಸ್ಥೆಗಳು ಸೇರಿದಂತೆ ಅವರ ಕಛೇರಿಗಳಲ್ಲಿ ಉಪಯೋಗಿಸುವ ವಾಹನಗಳಲ್ಲಿ ಹಾಗೂ ಯಾವುದೇ ಖಾಸಗಿ ವಾಹನಗಳ ಮೇಲೆ ಸರ್ಕಾರದ ಲಾಂಛನ ಮತ್ತು ಹೆಸರು ಪ್ರದರ್ಶಿಸುವುದನ್ನು ನಿರ್ಬಂಧಿಸಲಾಗಿದೆ. |

| | ಪ್ರಶ್ನೆ | ಉತ್ತರ |
|---|---|---|
| | ಹಕ್ಕುಗಳ ಒಕ್ಕೂಟ/ ಸಂಸ್ಥೆ ಇತ್ಯಾದಿ ಹೆಸರುಗಳನ್ನು ಚಿಹ್ನೆ/ಲಾಂಛನಗಳನ್ನು ಹಾಗೂ ಸಂಘ-ಸಂಸ್ಥೆಗಳ ಹೆಸರು, ವಾಹನದ ಮೇಲೆ ದೀಪ ಅಳವಡಿಸಿಕೊಂಡಿರುವವರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು: | ಮಾನ್ಯ ಉಚ್ಚ ನ್ಯಾಯಾಲಯದಲ್ಲಿ CRLP 1850/2017ರ ಪ್ರಕರಣಕ್ಕೆ ಸಂಬಂಧಿಸಿದಂತೆ ನೀಡಿದ ಆದೇಶದ ಪ್ರಕಾರ, ವಾಹನಗಳ ನೋಂದಣಿ ಫಲಕಗಳ ಮೇಲೆ ಅನಧಿಕೃತವಾಗಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ/ ರಾಜ್ಯ ಮಾನವ ಹಕ್ಕುಗಳ ಆಯೋಗಗಳ ಹೆಸರುಗಳನ್ನು ಹೋಲುವಂತಹ ರಾಷ್ಟ್ರೀಯ/ರಾಜ್ಯ ಮಾನವ ಹಕ್ಕುಗಳ ಒಕ್ಕೂಟ/ ಸಂಸ್ಥೆ ಇತ್ಯಾದಿ ಹೆಸರು ಗಳನ್ನು ಚಿಹ್ನೆ/ ಲಾಂಛನ ಗಳನ್ನು ಹಾಗೂ ಸಂಘ-ಸಂಸ್ಥೆಗಳ ಹೆಸರು ಅಳವಡಿಸಿಕೊಂಡಿರುವುದನ್ನು ತೆರವುಗೊಳಿಸಲು ಕ್ರಮ ವಹಿಸಲಾಗಿದೆ. ತದನಂತರ WP No.4635/2024 (GM-RES-PIL) ಪ್ರಕರಣವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು, ಸದರಿ WP ಕುರಿತು ದಿ:04-04-2025ರಂದು ನೀಡಿದ ಆದೇಶದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಅನಧಿಕೃತ ನೋಂದಣಿ ಫಲಕ ಅಳವಡಿಸಿಕೊಂಡಿರುವ ವಾಹನವು ಸಾರ್ವಜನಿಕ ಸ್ಥಳದಲ್ಲಿ ಕಂಡುಬಂದಲ್ಲಿ ಸಾರ್ವಜನಿಕರು ಅದರ ನೋಂದಣಿ ಫಲಕ, ಸ್ಥಳ (location) ಸಮೇತ ಭಾವಚಿತ್ರವನ್ನು ತೆಗೆದುಕೊಂಡು 94498 63459 Whatsapp ಸಂಖ್ಯೆಗೆ ರವಾನಿಸಿದಲ್ಲಿ ಅಂತಹ ವಾಹನ ಮಾಲೀಕರ ವಿರುದ್ಧ ನಿಯಮಾನುಸಾರ ಸಂಬಂಧಿಸಿದ ನೋಂದಣಿ ಪ್ರಾಧಿಕಾರಗಳಲ್ಲಿ ಕ್ರಮ ವಹಿಸಲಾಗುತ್ತಿದೆ ಹಾಗೂ ಪ್ರವರ್ತನ ಚಟುವಟಿಕೆಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲು ಮೋಟಾರು ವಾಹನ ನಿರೀಕ್ಷಕರುಗಳಿಗೆ ಸೂಚನೆಗಳನ್ನು ನೀಡಲಾಗಿದೆ. |
| ಉ. | ಇದುವರೆವಿಗೂ ಈ ಸಂಬಂಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಹಾಗೂ ವಿಧಿಸಲಾಗಿರುವ ದಂಡದ ಮೊತ್ತ ಎಷ್ಟು? (ವಿವರ ನೀಡುವುದು) | ಈ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ CRLP 1850/2017ರ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು ನೀಡಿದ ಆದೇಶದ ಪ್ರಕಾರ ಸಾರಿಗೆ ಇಲಾಖೆಯ ವತಿಯಿಂದ ರಾಜ್ಯಾದ್ಯಂತ ದಿನಾಂಕ:28-12-2019 ರಿಂದ 31-07-2025 ರವರೆಗೆ 14,982 ವಾಹನಗಳ ಮೇಲೆ ಪ್ರಕರಣಗಳನ್ನು ದಾಖಲಿಸಿ, ಒಟ್ಟು ರೂ.1,20,61,097/-ಗಳ ದಂಡವನ್ನು ವಸೂಲು ಮಾಡಲಾಗಿದೆ.<br><br>ಅದೇ ರೀತಿ ದೋಷಪೂರಿತ ನೋಂದಣಿ ಫಲಕ ಅಳವಡಿಕೆ ಸಂಬಂಧ ದಿನಾಂಕ:01-04-2015 ರಿಂದ 30-06-2025 ರವರೆಗೆ ಒಟ್ಟು 1,55,907 ಪ್ರಕರಣಗಳನ್ನು ದಾಖಲಿಸಿ, ರೂ.4,52,59,900/-ಗಳ ದಂಡವನ್ನು ವಸೂಲು ಮಾಡಲಾಗಿದೆ. |

**ಟಿಡಿ 61 ಟಿಡಿಕ್ಯೂ 2025**

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು